# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | 944 |
| ಸದಸ್ಯರ ಹೆಸರು | ಶ್ರೀ ಕೆ.ಎ. ತಿಪ್ಪೇಸ್ವಾಮಿ<br>(ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | 24-02-2023 |
| ಉತ್ತರಿಸುವ ಸಚಿವರು | ಕೃಷಿ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಕೇಂದ್ರ ಸರ್ಕಾರದ ಸಹಯೋಗದಿಂದ ಸ್ಥಾಪಿಸಲಾಗಿರುವ ಸಮಗ್ರ ಕೀಟ ನಿರೋಧಕ ನಿರ್ವಹಣೆ ಕೇಂದ್ರಗಳ ಸಂಸ್ಥೆ (Integrated Pest management Centre) ಎಷ್ಟು; (ಜಿಲ್ಲಾವಾರು ಪೂರ್ಣ ಮಾಹಿತಿ ನೀಡುವುದು) | ರಾಜ್ಯದಲ್ಲಿ ಕೇಂದ್ರ ಸರ್ಕಾರದ ಸಹಯೋಗದೊಂದಿಗೆ ಸಮಗ್ರ ಕೀಟ ನಿರೋಧಕ ನಿರ್ವಹಣೆ ಕೇಂದ್ರಗಳನ್ನು (Integrated Pest management Centre) ಸ್ಥಾಪನೆ ಮಾಡಿರುವುದಿಲ್ಲ. ಕೇಂದ್ರ ಸರ್ಕಾರದ ವತಿಯಿಂದ ರಾಜ್ಯದ ಬೆಂಗಳೂರಿನಲ್ಲಿ ಒಂದು ಪ್ರಾದೇಶಿಕ ಸಮಗ್ರ ಕೀಟ ನಿರ್ವಹಣಾ ಕೇಂದ್ರವನ್ನು ಸ್ಥಾಪಿಸಲಾಗಿರುತ್ತದೆ. |
| (ಆ) | ರಾಜ್ಯದಲ್ಲಿನ ರೈತರಿಗೆ ಈ ಕೇಂದ್ರಗಳು ಯಾವ ರೀತಿ ಕೀಟ ನಿರೋಧಕ ಮಾಹಿತಿಯನ್ನು ಯಾವ ರೂಪದಲ್ಲಿ ಮತ್ತು ಯಾವ ಹಂತದಲ್ಲಿ ಬಿತ್ತರಿಸುತ್ತಿವೆ; (ಜಿಲ್ಲಾವಾರು ಪೂರ್ಣ ಮಾಹಿತಿ ನೀಡುವುದು) | ಸಮಗ್ರ ಕೀಟ ನಿರ್ವಹಣೆಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರ ರಾಜ್ಯದಲ್ಲಿ ಸ್ಥಾಪಿಸಿರುವ ಪ್ರಾದೇಶಿಕ ಸಮಗ್ರ ಕೀಟ ನಿರ್ವಹಣಾ ಕೇಂದ್ರದ ವತಿಯಿಂದ ಕೆಳಕಂಡಂತೆ ಅವಶ್ಯಕತೆಗೆ ಅನುಗುಣವಾಗಿ ಜಿಲ್ಲೆಗಳಲ್ಲಿ ಕ್ರಮಗಳನ್ನು ವಹಿಸಲಾಗುತ್ತಿದೆ.<br>➢ ಜೈವಿಕ ಪೀಡೆನಾಶಕಗಳಾದ ಟ್ರೈಕೋಡರ್ಮಾ ವಿರಿಡೆ, ಸೂಡೋಮೊನಾಸ್ ಫ್ಲೋರೊಸೆನ್ಸ್ ಮತ್ತು ಮೆಟಾರೈಜಿಯಂ ಅನಿಸೊಪ್ಲಿಯಾ ಹಾಗೂ ಕೀಟಗಳ ತತ್ತಿ ಹಾಗೂ ಗೂಡು ಪರಾವಲಂಬಿಗಳು ಹಾಗೂ ಪರಭಕ್ಷಕಗಳನ್ನು ಉತ್ಪಾದಿಸಿ ರೈತರಿಗೆ ಉಚಿತವಾಗಿ ವಿತರಿಸಲಾಗುತ್ತಿದೆ.<br>➢ ರಾಜ್ಯದಲ್ಲಿನ ಬೆಳೆಗಳಿಗೆ ಬೆಳೆಯ ಎಲ್ಲಾ ಹಂತಗಳಲ್ಲಿ ನಿಯಮಿತವಾಗಿ ಪೀಡೆ ಸರ್ವೇಕ್ಷಣೆಯನ್ನು ಕೈಗೊಂಡು ಕಂಡುಬಂದಿರುವ ಅಥವಾ ಕಂಡುಬರಬಹುದಾದ ಕೀಟ/ರೋಗಗಳ ಬಗ್ಗೆ ರೈತರಿಗೆ, ರಾಜ್ಯ ಮತ್ತು ಕೇಂದ್ರ ಸರ್ಕಾರಕ್ಕೆ ಮಾಹಿತಿಯನ್ನು ನೀಡಲಾಗುತ್ತಿದೆ.<br>➢ ಸಮಗ್ರ ಪೀಡೆ ನಿರ್ವಹಣೆಯಲ್ಲಿ 14 ವಾರಗಳ ಕೃಷಿ ಕ್ಷೇತ್ರ ಶಾಲೆಗಳನ್ನು ರೈತರಿಗಾಗಿ ಆಯೋಜಿಸಲಾಗುತ್ತಿದ್ದು, ಸದರಿ ಕೃಷಿ ಕ್ಷೇತ್ರ ಶಾಲೆಗಳಲ್ಲಿ ಕೀಟ/ರೋಗ ಮತ್ತು ನಿರ್ವಹಣಾ ಕ್ರಮಗಳ ಬಗ್ಗೆ ಮಾಹಿತಿಯನ್ನು ನೀಡಲಾಗುತ್ತಿದೆ. |

| | | |
|---|---|---|
| | | ➢ ಸಮಗ್ರ ಪೀಡೆ ನಿರ್ವಹಣೆಯಲ್ಲಿ ನವೀನ ತಾಂತ್ರಿಕತೆಗಳ ಬಗ್ಗೆ ಮಾಹಿತಿಯನ್ನು ನೀಡುವ ಉದ್ದೇಶದಿಂದ 30 ದಿನಗಳ ಕಾಲೋಚಿತ ದೀರ್ಘ ತರಬೇತಿ ಕಾರ್ಯಕ್ರಮಗಳನ್ನು ಕೃಷಿ ಅಧಿಕಾರಿಗಳಿಗೆ 2 ದಿನಗಳ ತರಬೇತಿಯನ್ನು ರೈತರಿಗೆ ಹಾಗೂ ಪರಿಕರ ಮಾರಾಟಗಾರರಿಗೆ ಮತ್ತು 5 ದಿನಗಳ ತರಬೇತಿಯನ್ನು ಕೃಷಿ, ತೋಟಗಾರಿಕೆ ಹಾಗೂ ರೇಷ್ಮೆ ಇಲಾಖೆಯ ವಿಸ್ತರಣಾ ಅಧಿಕಾರಿಗಳಿಗೆ ಆಯೋಜಿಸಲಾಗುತ್ತಿದೆ.<br><br>➢ ಬೆಳೆಗಳಲ್ಲಿ ಸಮಗ್ರ ಕೀಟ/ರೋಗ ನಿರ್ವಹಣೆಗಳ ಬಗ್ಗೆ ಹಸ್ತ ಪ್ರತಿಗಳನ್ನು ಸ್ಥಳೀಯ ಭಾಷೆಯಲ್ಲಿ ಮುದ್ರಿಸಿ ರೈತರಿಗೆ ವಿತರಿಸಲಾಗುತ್ತಿದೆ. |
| (ಇ) | ರಾಜ್ಯದಲ್ಲಿ ಇತ್ತೀಚಿಗೆ ರೈತರ ಫಸಲಿಗೆ ಕೀಟಗಳ ಬಾಧೆ ಹೆಚ್ಚಳವಾಗಿದ್ದು, ಇವುಗಳ ನಿಯಂತ್ರಣಕ್ಕೆ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ಹೆಚ್ಚಿನ ಕೀಟ ನಿರೋಧಕ ನಿರ್ವಹಣೆ ಕೇಂದ್ರಗಳು ಅವಶ್ಯವೆನ್ನುವುದು ಸರ್ಕಾರ ಮನಗಂಡಿದೆಯೇ; ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು; (ಪೂರ್ಣ ಮಾಹಿತಿ ನೀಡುವುದು). | ಹೆಚ್ಚಿನ ಸಮಗ್ರ ಪೀಡೆ ನಿರ್ವಹಣಾ ಕೇಂದ್ರಗಳ ಅವಶ್ಯಕತೆಯನ್ನು ಮನಗಂಡು ಪ್ರಾದೇಶಿಕ ಸಮಗ್ರ ಕೀಟ ನಿರ್ವಹಣಾ ಕೇಂದ್ರ, ಬೆಂಗಳೂರು ವತಿಯಿಂದ ಕೇಂದ್ರ ಸರ್ಕಾರಕ್ಕೆ 2 ಸಮಗ್ರ ಕೀಟ ನಿರ್ವಹಣಾ ಕೇಂದ್ರಗಳನ್ನು ಸ್ಥಾಪಿಸಲು ಪ್ರಸ್ತಾವನೆಯನ್ನು ಸಲ್ಲಿಸಲಾಗಿರುತ್ತದೆ.<br><br>ರಾಜ್ಯದಲ್ಲಿ ರೈತರು ಬೆಳೆದ ಬೆಳೆಗಳಲ್ಲಿ ಕೀಟ/ರೋಗಗಳ ಬಾಧೆ ನಿಯಂತ್ರಣಕ್ಕೆ ಹೋಬಳಿ ಮಟ್ಟದಲ್ಲಿ ಕೃಷಿ ಅಧಿಕಾರಿ/ಸಹಾಯಕ ಕೃಷಿ ಅಧಿಕಾರಿಗಳು, ತಾಲ್ಲೂಕು ಮಟ್ಟದಲ್ಲಿ ಸಹಾಯಕ ಕೃಷಿ ನಿರ್ದೇಶಕರು, ಕೃಷಿ ಅಧಿಕಾರಿ, ವಿಭಾಗೀಯ ಮಟ್ಟದಲ್ಲಿ ಉಪ ಕೃಷಿ ನಿರ್ದೇಶಕರು, ಕೃಷಿ ಅಧಿಕಾರಿ ಹಾಗೂ ಜಿಲ್ಲಾ ಮಟ್ಟದಲ್ಲಿ ಜಂಟಿ ಕೃಷಿ ನಿರ್ದೇಶಕರು, ಸಹಾಯಕ ಕೃಷಿ ನಿರ್ದೇಶಕರು ಹಾಗೂ ಕೃಷಿ ಅಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿದ್ದು, ಈ ಎಲ್ಲಾ ಅಧಿಕಾರಿಗಳು ಕೃಷಿ ಪದವೀಧರರಾಗಿದ್ದು, ತಾಂತ್ರಿಕ ಸಿಬ್ಬಂದಿಗಳಾಗಿ ಕೆಲಸ ನಿರ್ವಹಿಸುತ್ತಿದ್ದು, ಎಲ್ಲಾ ತಾಂತ್ರಿಕ ಸಿಬ್ಬಂದಿಗಳಿಂದ ಕೀಟ ನಿರ್ವಹಣೆಗೆ ಸಂಬಂಧಿಸಿದಂತೆ ಅಗತ್ಯ ಮಾಹಿತಿಯನ್ನು ಸಂದರ್ಭ ಅನುಸಾರ ರೈತರಿಗೆ ನೀಡಲಾಗುತ್ತಿದೆ.<br><br>ರಾಜ್ಯ ಮತ್ತು ಜಿಲ್ಲಾ ಮಟ್ಟದಲ್ಲಿ ರಾಜ್ಯ ಹಾಗೂ ಜಿಲ್ಲಾ ಪೀಡೆ ಸರ್ವೇಕ್ಷಣಾ ಮತ್ತು ಸಲಹಾ ಘಟಕಗಳನ್ನು ಸ್ಥಾಪಿಸಲಾಗಿರುತ್ತದೆ. ಸದರಿ ಘಟಕಗಳು ಕೃಷಿ ಇಲಾಖೆಯ ತಾಂತ್ರಿಕ ಸಿಬ್ಬಂದಿ ಹಾಗೂ ಕೃಷಿ ವಿಶ್ವವಿದ್ಯಾಲಯಗಳಲ್ಲಿನ ನುರಿತ ವಿಜ್ಞಾನಿಗಳನ್ನು ಒಳಗೊಂಡಿದ್ದು, ನಿಯಮಿತವಾಗಿ ಕ್ಷೇತ್ರ ಭೇಟಿಗಳನ್ನು ಕೈಗೊಂಡು ಸಮಗ್ರ ಪೀಡೆ ನಿರ್ವಹಣೆ ಬಗ್ಗೆ ಮಾಹಿತಿಯನ್ನು ನೀಡಲಾಗುತ್ತಿದೆ.<br><br>ಬೆಳೆಗಳಲ್ಲಿ ಕೀಟ/ರೋಗಗಳ ಬಾಧೆ ಕಂಡುಬಂದಲ್ಲಿ ಕೈಗೊಳ್ಳಬಹುದಾದ ನಿರ್ವಹಣಾ ಕ್ರಮಗಳ ಬಗ್ಗೆ |

| | | |
|---|---|---|
| | | ಮಾಹಿತಿಯನ್ನು ಹಸ್ತ ಪ್ರತಿಗಳ ಮೂಲಕ, ಸಮೂಹ ಮಾಧ್ಯಮಗಳ ಮೂಲಕ ರೈತರಿಗೆ ಮಾಹಿತಿಯನ್ನು ನೀಡಲಾಗುತ್ತಿದೆ.<br>ರಾಜ್ಯದಲ್ಲಿ ಒಟ್ಟು 224 ಸಂಚಾರಿ ಸಸ್ಯ ಆರೋಗ್ಯ ಚಿಕಿತ್ಸಾಲಯಗಳನ್ನು ಸ್ಥಾಪಿಸಲಾಗಿದ್ದು, ಸದರಿ ಸಂಚಾರಿ ಸಸ್ಯ ಆರೋಗ್ಯ ಚಿಕಿತ್ಸಾಲಯಗಳ ಮೂಲಕ ರೈತರ ತಾಕುಗಳಿಗೆ ಭೇಟಿ ನೀಡಿ ಸಮಗ್ರ ಪೀಡೆ ನಿರ್ವಹಣೆಯೂ ಸೇರಿದಂತೆ ರೈತರಿಗೆ ಅಗತ್ಯವಿರುವ ತಾಂತ್ರಿಕ ಮಾಹಿತಿಯನ್ನು ನೀಡಲಾಗುತ್ತಿದೆ. |
| (ಈ) | ರಾಜ್ಯ ಸರ್ಕಾರ ಕೀಟ ನಿರೋಧಕ ನಿರ್ವಹಣೆ ಕೇಂದ್ರಗಳ ಸ್ಥಾಪನೆಯೊಂದಿಗೆ ಕೀಟಗಳ ನಿಯಂತ್ರಣಕ್ಕೆ ಬೇರೆ ರೀತಿಯ ವ್ಯವಸ್ಥೆ ಬಗ್ಗೆ ಅಧ್ಯಯನ ನಡೆಸಿದೆಯೇ? ಹಾಗಿದ್ದಲ್ಲಿ, ಪೂರ್ಣ ವಿವರ ನೀಡುವುದು; | ಬೆಳೆಗಳಲ್ಲಿ ಕಂಡುಬರುವ ಕೀಟ/ರೋಗ/ಕಳೆಗಳನ್ನು ನಿಖರವಾಗಿ ಗುರುತಿಸಿ ಕೀಟ/ರೋಗ/ಕಳೆಗಳ ತೀವ್ರತೆಗೆ ಅನುಗುಣವಾಗಿ ನಿರ್ವಹಣೆ ಸಲಹೆಗಳನ್ನು ರೈತರಿಗೆ ನೀಡುವ ಉದ್ದೇಶದಿಂದ ಕೃಷಿ ವಿಶ್ವವಿದ್ಯಾಲಯ, ರಾಯಚೂರು ವತಿಯಿಂದ ವಿನೂತನವಾಗಿ ಅಬಭಿವೃದ್ಧಿಪಡಿಸಿರುವ ಇ-ಸ್ಯಾಪ್ ತಂತ್ರಜ್ಞಾನವನ್ನು ಬಳಸಲಾಗುತ್ತಿದೆ. |

ಸಂಖ್ಯೆ: AGRI/45/ACT/2023

(ಬಿ.ಸಿ. ಪಾಟೀಲ್)
ಕೃಷಿ ಸಚಿವರು